ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 369 ಪಿಜಿಸಿ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 2-5-2015

## ತಿದ್ದುಪಡಿ

ಹೊಸ ಶಾಲೆ ನೊಂದಣಿ ಸಂಬಂಧ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 369 ಪಿಜಿಸಿ 2014, ದಿ: 11-11-2014ರಲ್ಲಿ ಶಾಲೆಗಳಲ್ಲಿ ಕಲ್ಪಿಸಬೇಕಾದ ಮೂಲಭೂತ ಸೌಕರ್ಯಗಳ ಕುರಿತು ಕ್ರಮ ಸಂಖ್ಯೆ (1)ರಲ್ಲಿ '1 ರಿಂದ 5, 6 ರಿಂದ 8 ಮತ್ತು 9 ರಿಂದ 10ನೇ ತರಗತಿಗಳನ್ನು ತೆರೆಯಲು ಗ್ರಾಮೀಣ ಪ್ರದೇಶದಲ್ಲಿ ಕನಿಷ್ಠ ಎರಡು ಎಕರೆ, ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿ ಪ್ರದೇಶದಲ್ಲಿ ಕನಿಷ್ಠ ಒಂದೂವರೆ ಎಕರೆ ಹಾಗೂ ಬಿ.ಬಿ.ಎಂ.ಪಿ/ಮಹಾನಗರ ಪಾಲಿಕೆಗಳ ಪ್ರದೇಶಗಳಲ್ಲಿ ಕನಿಷ್ಠ 01 ಎಕರೆ ಪರಿವರ್ತಿತ ಭೂಮಿ ಆಡಳಿತ ಮಂಡಳಿಯ ಸ್ವಂತ ಹೆಸರಿನಲ್ಲಿ ಇರಬೇಕು ಅಥವಾ ಸದರಿ ಭೂಮಿಯು 30 ವರ್ಷಗಳ ಲೀಸ್ ಅವಧಿಗೆ ಸಂಸ್ಥೆಯ ಹೆಸರಿನಲ್ಲಿ ಇರಬೇಕು' ಎಂಬುದನ್ನು ಮಾರ್ಪಡಿಸಿ ಈ ಕೆಳಕಂಡಂತೆ ತಿದ್ದಿಕೊಂಡು ಓದಿಕೊಳ್ಳತಕ್ಕದ್ದು.

1 ರಿಂದ 8ನೇ ತರಗತಿಯವರೆಗೆ ಶಾಲೆ ಪ್ರಾರಂಭಿಸಲು ಗ್ರಾಮೀಣ ಪ್ರದೇಶದಲ್ಲಿ/ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿ/ ಮಹಾನಗರ ಪಾಲಿಕೆಗಳ ವ್ಯಾಪ್ತಿಯ (ಬಿ.ಬಿ.ಎಂ.ಪಿ.ಯನ್ನು ಹೊರತುಪಡಿಸಿ) ಪ್ರದೇಶದಲ್ಲಿ ಕನಿಷ್ಠ ಒಂದು ಎಕರೆ ಪರಿವರ್ತಿತ ಭೂಮಿ/ಗ್ರಾಮ ಪಂಚಾಯಿತಿ ಇತ್ಯಾದಿ ಪ್ರಾಧಿಕಾರದಿಂದ ಶೈಕ್ಷಣಿಕ ಉದ್ದೇಶಗಳಿಗೆ ಲೈಸನ್ಸ್ ಮುಖಾಂತರ ಬಳಸಬಹುದಾದ ಕನಿಷ್ಠ ಒಂದು ಎಕರೆ ಭೂಮಿ-ಸ್ವಂತ ಹೆಸರಿನಲ್ಲಿ ಇರಬೇಕು ಅಥವಾ 30 ವರ್ಷಗಳ ಲೀಸ್ ಅವಧಿಗೆ ಸಂಸ್ಥೆಯ ಹೆಸರಿನಲ್ಲಿರಬೇಕು ( 1 ರಿಂದ 10ನೇ ತರಗತಿಯವರೆಗೆ ಒಂದೇ ಆವರಣದಲ್ಲಿ ಶಾಲೆ ಪ್ರಾರಂಭಿಸಲು ಒಂದು ಎಕರೆ ಹೊಂದಿರಬೇಕು. ಪ್ರತ್ಯೇಕವಾಗಿ 9 ಮತ್ತು 10ನೇ ತರಗತಿಯ ಪ್ರೌಢ ಶಾಲೆ ಪ್ರಾರಂಭಿಸಲು ಸಹ 1 ಎಕರೆ ಭೂಮಿ ಇರಬೇಕು)

ಬಿ.ಬಿ.ಎಂ.ಪಿ. ಪ್ರದೇಶಗಳಲ್ಲಿ 1 ರಿಂದ 8ನೇ ತರಗತಿ ಶಾಲೆಗಳಿಗೆ ಕನಿಷ್ಠ ಅರ್ಧ ಎಕರೆ ಭೂಮಿ ಸ್ವಂತ ಹೆಸರಿನಲ್ಲಿ ಇರಬೇಕು ಅಥವಾ 30 ವರ್ಷಗಳ ಲೀಜ್ ಅವಧಿಗೆ ಸಂಸ್ಥೆಯ ಹೆಸರಿನಲ್ಲಿರಬೇಕು. 1 ರಿಂದ 8ನೇ ತರಗತಿಯ ಜೊತೆಗೆ 9 ಮತ್ತು 10ನೇ ತರಗತಿಗಳನ್ನು ಹೊಂದಲು ಇಚ್ಚಿಸುವ ಶಾಲೆಗಳು ಒಂದು ಎಕರೆ ಕನಿಷ್ಠ ಭೂಮಿ ಸ್ವಂತ ಹೆಸರಿನಲ್ಲಿರಬೇಕು.

ಬೆಂಗಳೂರು ಬೃಹತ್ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 9 ಮತ್ತು 10ನೇ ತರಗತಿಗಳನ್ನು ಪ್ರತ್ಯೇಕವಾಗಿ ತೆರೆಯಲು ಅರ್ಧ ಎಕರೆ ಕನಿಷ್ಠ ಭೂಮಿ ಸ್ವಂತ ಹೆಸರಿನಲ್ಲಿ ಅಥವಾ 30 ವರ್ಷಗಳ ಲೀಜ್ ಅವಧಿಗೆ ಸಂಸ್ಥೆಯ ಹೆಸರಿನಲ್ಲಿರಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್.ಸೋಮಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)

2/5/15

ಸಂಕಲನಕಾರರು, ಕರ್ನಾಟಕ ವಿಶೇಷ ಪತ್ರ, ಬೆಂಗಳೂರು. – ಈ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ವಿಶೇಷ ಪತ್ರದಲ್ಲಿ ಪ್ರಕಟಿಸಿ ಪ್ರಕಟಿತ 500 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.

ಗೆ:

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಗುಲ್ಬರ್ಗ.
3. ನಿರ್ದೇಶಕರು, ಪ್ರಾಥಮಿಕ/ಪ್ರೌಢ/ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಧಾರವಾಡ/ಗುಲ್ಬರ್ಗ,
4. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪ ನಿರ್ದೇಶಕರು (ಆಡಳಿತ)/(ಅಭಿವೃದ್ಧಿ), ಕ್ಷೇತ್ರ ಶಿಕ್ಷಣಾಧಿಕಾರಿಗಳು/ಕ್ಷೇತ್ರ ಸಂಪನ್ಮೂಲ ಅಧಿಕಾರಿಗಳು – ಸಂಬಂಧಿಸಿದ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ.

ಪ್ರತಿಗಳು:–

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
3. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–560001.**

ಸಂಖ್ಯೆ : ಸಿ7(2)ಪ್ರಾಶಿಅ 73/ 2014–15 ದಿನಾಂಕ: 07/05/2015

ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಡಿ 369 ಪಿ.ಜಿ.ಸಿ 2014 ದಿನಾಂಕ: 02/05/2015ರ ಯಥಾ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ರವಾನಿಸಿದೆ.

(ಕೆ.ಆನಂದ)
ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ಗೆ:
1)ರಾಜ್ಯದ ಎಲ್ಲಾ ಉಪನಿರ್ದೇಶಕರಿಗೆ ಮುಂದಿನ ಕ್ರಮಕ್ಕಾಗಿ.
2)ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರ ಮುಖಾಂತರ.